ದಿನಾಂಕ: 10.03.2022 ರಂದು ಬೆಳಗ್ಗೆ 10.30 ಗಂಟೆಗೆ ರಾಜಾಜಿನಗರ ವಾರ್ಡ್ ನಂ. 99 ರಲ್ಲಿ ಶ್ರೀ ಹೆಚ್.ವಿ. ಅಶ್ವತ್ಥ್, ನೋಡಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡುವಳಿಗಳ ವಿವರ:-

**ಹಾಜರಿದ್ದ ಪಾಲಿಕೆಯ ಅಧಿಕಾರಿಗಳು ಹಾಗೂ ವಾರ್ಡ್ ಕಮಿಟಿ ಸದಸ್ಯರು:-**

1. ಶ್ರೀ ಹೆಚ್.ವಿ. ಅಶ್ವತ್ಥ, ನೋಡಲ್ ಅಧಿಕಾರಿಗಳು
2. ಶ್ರೀ ಸುಭಾಸ್ ಪಾಟೀಲ್, ಸಹಾಯಕ ಅಭಿಯಂತರರು, ವಾರ್ಡ್ ನಂ. 99
3. ಶ್ರೀ ಜಿ.ಸಿ. ಲೋಕೇಶ್ ಅಸೆಸರ್
4. ಶ್ರೀಮತಿ ದಿವ್ಯಾ, ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ ರಘು, ಕಿರಿಯ ಆರೋಗ್ಯ ಪರಿವೀಕ್ಷಕರು
6. ಶ್ರೀ ಶರಣ ಬಸವ, ಮಾರ್ಷಲ್
7. ಶ್ರೀ ಉಮೇಶ್, ಸದಸ್ಯರು
8. ಶ್ರೀ ಆನಂದ್
9. ಶ್ರೀ ನಾಗರಾಜ್, ಸದಸ್ಯರು.

ದಿನಾಂಕ: 10.03.2022 ರಂದು ಬೆಳಗ್ಗೆ 10.30 ಗಂಟೆಗೆ ವಾರ್ಡ್ ನಂ. 99 ರಾಜಾಜಿನಗರದ ಡಾ: ಅಬ್ದುಲ್ ಕಲಾಂ, ಸಭಾಂಗಣದಲ್ಲಿ ಪಾಲಿಕೆ ಅಧಿಕಾರಿಗಳೊಂದಿಗೆ ಸಭೆಯನ್ನು ಕೈಗೊಂಡು ಈ ಕೆಳಗಿನ ವಿಷಯಗಳನ್ನು ಚರ್ಚಿಸಲಾಯಿತು.

1. ಇಂದಿರಾನಗರ ಸ್ಲಂನ 2ನೇ ಕ್ರಾಸ್ ನಲ್ಲಿ ವಿದ್ಯುತ್ ಕಂಬ ಬದಲಾವಣೆಯ ಬಗ್ಗೆ ಚರ್ಚಿಸಲಾಯಿತು. ಇದಕ್ಕೆ ಉತ್ತರವಾಗಿ ಬೆಸ್ಕಾಂ ಅಧಿಕಾರಿ ರವರು ರಸ್ತೆ ಕಿರಿದಾಗಿದ್ದು, ಕಂಬವನ್ನು ಒಳಗೆ ಸಾಗಿಸಲು ಅವಕಾಶ ಮಾಡಿಕೊಟ್ಟಲ್ಲಿ, ಅಲ್ಲಿ ಕಂಬವನ್ನು ಅಳವಡಿಸಲಾಗುವುದು. ಎಂದು ಸಭೆಯಲ್ಲಿ ತಿಳಿಸಿದರು.
2. ಎ.ಬಿ.ಸಿ. ಕೇಬಲ್‌ಗಳನ್ನು ವಾರ್ಡ್ ಕೆಲವು ರಸ್ತೆಗಳಲ್ಲಿ ಅಳವಡಿಸದೆ ಇರುವ ಬಗ್ಗೆ ವಾರ್ಡ್ ಸದಸ್ಯರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಉತ್ತರವಾಗಿ ಬೆಸ್ಕಾಂ ಎಇಇ ಮತ್ತು ಇಇ ರವರಿಗೆ ಪತ್ರ ಬರೆಯಲು ಸಭೆಯಲ್ಲಿದ್ದ ಸಭೆಯಲ್ಲಿದ್ದ ಬೆಸ್ಕಾಂ ಅಧಿಕಾರಿಗಳಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.
3. ವಾರ್ಡ್ ಸದಸ್ಯರಾದ ಶ್ರೀ ಉಮೇಶ್, ಆನಂದ್, ನಾಗರಾಜ್ ಮತ್ತು ಶ್ರೀನಿವಾಸ್ ರವರು ಸಿಲ್ಟ್ ಅಂಡ್ ಟ್ರಾಕ್ಟರ್ ಕಾಮಗಾರಿಯ ಬಗ್ಗೆ ಚರ್ಚಿಸಿದರು. ಇದಕ್ಕೆ ಉತ್ತರವಾಗಿ ವಾರ್ಡಿನ ಅಭಿಯಂತರರು ರವರು ಪ್ರತಿ ದಿನ ಬಂದು ರಸ್ತೆಯಲ್ಲಿರುವ ಮಣ್ಣನ್ನು ತೆಗೆದುಕೊಂಡು ಹೋಗುತ್ತಿರುವುದಾಗಿ ತಿಳಿಸಿದರು.
4. ವಾರ್ಡ್ ಸದಸ್ಯರು, ವಾರ್ಡ್ ಕಮಿಟಿ ಸಭೆಗೆ ಎಲ್ಲಾ ಇಲಾಖಾ ಅಧಿಕಾರಿಗಳು ಹಾಜರಾಗುವಂತೆ ತಿಳಿಸಲು ನೋಡಲ್ ಅಧಿಕಾರಿ ರವರ ಗಮನಕ್ಕೆ ತಂದರು ಇದಕ್ಕೆ ಉತ್ತರವಾಗಿ ನೋಡಲ್ ಅಧಿಕಾರಿ ರವರು ವಾರ್ಡ್ ಅಭಿಯಂತರರಿಗೆ ದೂರವಾಣಿ ಮುಖಾಂತರ ಮಾತನಾಡಿ ಸಭೆಗೆ ಹಾಜರಾಗುವಂತೆ ತಿಳಿಸಿದರು.
5. ವಾರ್ಡ್ ಸದಸ್ಯರುಗಳು ವಾರ್ಡಿನ ರಸ್ತೆಗಳಲ್ಲಿ ಮರದ ಕೊಂಬೆಗಳು ಜೋತಾಡುತ್ತಿದ್ದು, ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದರಿಂದ ಅವುಗಳನ್ನು ಅರಣ್ಯ ಇಲಾಖೆಯವರಿಂದ ಟ್ರಿಂ ಮಾಡಲು ಸದಸ್ಯರು ವಿನಂತಿಸಿದರು.
6. ವಾರ್ಡ್ ಸದಸ್ಯರು ಸಿವಿಲ್ ಕಾಮಗಾರಿಗಳ ಬಗ್ಗೆ ಪ್ರಸ್ತಾಪಿಸಿದರು. ಇದಕ್ಕೆ ಉತ್ತರವಾಗಿ ವಾರ್ಡ್ ಅಭಿಯಂತರರು ವಾರ್ಡಿನ ರಸ್ತೆಗಳಲ್ಲಿ ಬೇರೆ ಬೇರೆ ಅನುದಾನದಡಿಯಲ್ಲಿ ಕಾಮಗಾರಿಗಳನ್ನು ನಿರ್ವಹಿಸುತ್ತಿರುವುದಾಗಿ ತಿಳಿಸಿದರು.
7. ನೋಡಲ್ ಅಧಿಕಾರಿಗಳು ಮಾರ್ಷಲ್‌ಗಳಿಗೆ ಸಾರ್ವಜನಿಕ ಸ್ಥಳಗಳಲ್ಲಿ ಕಸ ಹಾಕಿದವರ ಮೇಲೆ ದಂಡ ವಿಧಿಸುವಂತೆ ಸೂಚಿಸಿದರು.

ಸದಸ್ಯ ಕಾರ್ಯದರ್ಶಿಗಳು ಸಭೆಯಲ್ಲಿ ಹಾಜರಿದ್ದ ಮಾನ್ಯ ಅಧ್ಯಕ್ಷರಿಗೆ ವಾರ್ಡ್ ಸಮಿತಿ ಸದಸ್ಯರುಗಳಿಗೆ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ
ವಾರ್ಡ್ ಸಮಿತಿ
ವಾರ್ಡ್ ನಂ. 99

Scanned by CamScanner